**Bangalore**
**Regional News**
**13.06.2025 / 2.30 pm**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಮಾವು ಮಾರುಕಟ್ಟೆ ಏರಿಳಿತ; ಮಧ್ಯ ಪ್ರವೇಶಿಸಲು ಕೇಂದ್ರ ಕೃಷಿ ಸಚಿವರಿಗೆ ಮುಖ್ಯಮಂತ್ರಿ ಪತ್ರ

೨. ಕೋಮು ಸಂಘರ್ಷ ತಡೆಗೆ ವಿಶೇಷ ಕಾರ್ಯಪಡೆ ರಚನೆ - ಗೃಹ ಸಚಿವ ಮಂಗಳೂರಿನಲ್ಲಿ ಚಾಲನೆ

೩. ಕೆಆರ್‌ಎಸ್ ಬಳಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣ ಪ್ರಸ್ತಾಪ - ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್ ವಿರೋಧ

೪. ಫ್ರಾನ್ಸ್‌ನ ಪ್ರಮುಖ ವೇದಿಕೆಗಳಲ್ಲಿ ಕರ್ನಾಟಕ ಪ್ರತಿನಿಧಿಸಿದ ಸಚಿವ ಪ್ರಿಯಾಂಕ್ ಖರ್ಗೆ

><><><><><><><><

ರಾಜ್ಯದ ಮಾವು ಕೃಷಿಕರು ಪ್ರಸ್ತುತ ಕಟಾವು ಋತುವಿನಲ್ಲಿ ಮಾರುಕಟ್ಟೆ ಏರಿಳಿತದಿಂದಾಗಿ ತೊಂದರೆಯನ್ನು ಅನುಭವಿಸುತ್ತಿದ್ದು, ಕೂಡಲೇ ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅವರಿಗೆ ಪತ್ರ ಬರೆದು, ವಿನಂತಿಸಿದ್ದಾರೆ. ರಾಜ್ಯದಲ್ಲಿ ಮಾವು ಅತಿದೊಡ್ಡ ತೋಟಗಾರಿಕಾ ಬೆಳೆಯಾಗಿದ್ದು, ಈ ಬಾರಿ ಒಂದು ಲಕ್ಷ ೩೯ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯಲಾಗಿದೆ. ಈ ಹಂಗಾಮಿನಲ್ಲಿ ೮ ರಿಂದ ೧೦ ಲಕ್ಷ ಮೆಟ್ರಿಕ್ ಟನ್ ಮಾವು ಉತ್ಪಾದನೆಯನ್ನು ಬೆಂಗಳೂರಿನ ಸುತ್ತಮುತ್ತಲ ಜಿಲ್ಲೆಗಳಲ್ಲೇ ನಿರೀಕ್ಷೆ ಮಾಡಲಾಗಿದೆ. ಪ್ರಾರಂಭದಲ್ಲಿ ಕ್ವಿಂಟಾಲ್‌ಗೆ ೧೨ ಸಾವಿರ ರೂಪಾಯಿಯಿದ್ದ ಬೆಲೆ ಈಗ ೩ ಸಾವಿರ ರೂಪಾಯಿಗೆ ಇಳಿದಿದೆ. ಮಾವು ಉತ್ಪಾದನೆಯ ಖರ್ಚು ಕ್ವಿಂಟಾಲ್‌ಗೆ ೫ ಸಾವಿರ ರೂಪಾಯಿಗಿಂತಲೂ ಹೆಚ್ಚಿದ್ದು, ರೈತರು ನಷ್ಟ ಅನುಭವಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಪತ್ರದಲ್ಲಿ ತಿಳಿಸಿದ್ದಾರೆ. ಕೇಂದ್ರ ಸಂಸ್ಥೆಗಳಾದ ನೆಫೆಡ್, ಹಾಗೂ ಎನ್‌ಸಿಸಿಎಫ್‌ಗಳ ಮುಖಾಂತರ ಮಾವು ಖರೀದಿಸುವ ಮೂಲಕ ಕೇಂದ್ರ, ರಾಜ್ಯದ ರೈತರ ಹಿತ ಕಾಪಾಡಬೇಕೆಂದು ಮುಖ್ಯಮಂತ್ರಿ ಮನವಿ ಮಾಡಿದ್ದಾರೆ.

><><><><><><><><

ಕೋಮು ಸಂಘರ್ಷವನ್ನು ತಡೆಗಟ್ಟುವ ಸಲುವಾಗಿ ಮಂಗಳೂರಿನಲ್ಲಿ ವಿಶೇಷ ಕಾರ್ಯಪಡೆ ರಚಿಸಲಾಗಿದ್ದು, ಇಂದು ಮಂಗಳೂರಿನ ಪೊಲೀಸ್ ಕವಾಯತು ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಕೋಮು ಸಂಘರ್ಷ ನಿಗ್ರಹಕ್ಕೆ ಮಾಡಿರುವ ಸ್ಪೆಷಲ್ ಆಕ್ಷನ್ ಫೋರ್ಸ್ ದಕ್ಷಿಣ ಕನ್ನಡ, ಉಡುಪಿ ಮತ್ತು ಶಿವಮೊಗ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ಮಾಡಲಿದೆ. ಡಿಐಜಿ ದರ್ಜೆ

ಅಧಿಕಾರಿ ನೇತೃತ್ವದಲ್ಲಿ ಈ ತಂಡ ಕಾರ್ಯ ನಿರ್ವಹಿಸಲಿದ್ದು, ೨೪೮ ಸಿಬ್ಬಂದಿ ಒಳಗೊಂಡ ಮೂರು ಕಂಪನಿ ಕಾರ್ಯಾಚರಣೆಗೆ ಸಿದ್ಧವಾಗಿದೆ. ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗದಲ್ಲಿ ಎಸ್‌ಎಫ್ ಅಗತ್ಯವಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಂತಿ ಇದ್ದರೆ ರಾಜ್ಯದಲ್ಲಿ ಶಾಂತಿ ಇರುತ್ತದೆ. ಈ ಕಾರ್ಯಪಡೆ ಕೆಲಸಕ್ಕೆ ಜಿಲ್ಲೆಯ ಜನರು ಸಹಕಾರ ನೀಡಬೇಕು. ಅಗತ್ಯವಿದ್ದರೆ ಇಡೀ ರಾಜ್ಯದಲ್ಲಿ ಈ ಕಾರ್ಯಪಡೆ ಸ್ಥಾಪನೆ ಮಾಡುತ್ತೇವೆ ಎಂದುಅವರು ತಿಳಿಸಿದರು.

><><><><><><><><

ರಾಜ್ಯ ಸರ್ಕಾರ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೆಆರ್‌ಎಸ್ ಅಣೆಕಟ್ಟೆಯ ಬೃಂದಾವನದ ಬಳಿ ಸಾವಿರಾರು ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ತಮ್ಮ ವಿರೋಧವಿದ್ದು, ಸಂಸ್ಕೃತಿ, ಪರಂಪರೆಯ ಪ್ರತೀಕವಾದ ಗಂಗಾರತಿ ಮಾದರಿಯ ಕಾವೇರಿ ಆರತಿಗೆ ಬೆಂಬಲವಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದ್ದಾರೆ. ಮಂಡ್ಯ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆಯೇ ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ವಿರೋಧ ವ್ಯಕ್ತಪಡಿಸಿದ್ದು, ಇದಕ್ಕೆ ಪ್ರಮುಖ ಕಾರಣ ಮಂಡ್ಯ ಜಿಲ್ಲೆಯ ರೈತರು, ಸಾರ್ವಜನಿಕರು ಹಾಗೂ ಸ್ಥಳೀಯರು ವಿರೋಧ ವ್ಯಕ್ತಪಡಿಸುವಾಗ ಕಾಳಜಿಯುಳ್ಳ ಜನಪ್ರತಿನಿಧಿಯಾಗಿ ರಾಜವಂಶಸ್ಥನಾಗಿ ಜನರ ಭಾವನೆಗೆ ಸ್ಪಂದಿಸುವುದು ತನ್ನ ಕರ್ತವ್ಯ ಎಂದು ಸ್ಪಷ್ಟಪಡಿಸಿದರು. ಕೆಆರ್‌ಎಸ್ ಡ್ಯಾಂಗೆ ನೂರು ವರ್ಷ ಕಳೆದಿದೆ. ಇದು ಸೂಕ್ಷ್ಮ ಪ್ರದೇಶವಾಗಿದ್ದು, ಪ್ರಕೃತಿದತ್ತವಾಗಿದೆ. ಡ್ಯಾಂನ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಸಾರ್ವಜನಿಕರು ತಮ್ಮ ಭಾವನೆ ವ್ಯಕ್ತಪಡಿಸಿದ್ದಾರೆ. ಆ ಭಾವನೆಗೆ ಬೆಲೆ ಕೊಡಬೇಕಾದ್ದು ತನ್ನ ಆದ್ಯ ಕರ್ತವ್ಯ ಎಂದರು. ಗಂಗಾರತಿ ಮಾದರಿಯಲ್ಲಿ ರಾಜ್ಯ ಸರ್ಕಾರ ಕಾವೇರಿ ಆರತಿ ಮಾಡಲು ಹೊರಟಿರುವುದು ಒಳ್ಳೆಯ ವಿಚಾರ. ನಮ್ಮ ಸಂಸ್ಕೃತಿ ಪರಂಪರೆ, ಹಿಂದೂ ಧರ್ಮವನ್ನು ಬಿಂಬಿಸುವ ಕಾರ್ಯಕ್ರಮವನ್ನು ಮಾಡಲು ಹೊರಟಾಗ ಬೆಂಬಲಿಸುವುದು ನಮ್ಮ ಕರ್ತವ್ಯ ಎಂದು ಅವರು ಹೇಳಿದರು.

><><><><><><><><

ರಾಯಚೂರು ಜಿಲ್ಲೆಯಲ್ಲಿ ಹಾದುಹೋಗಿರುವ ಚೆನ್ನೈ ಸೂರತ ಭಾರತ್ ಮಾಲಾ ರಸ್ತೆಯ ಕಾಮಗಾರಿ ವೀಕ್ಷಣೆ ಮಾಡಿದ ಸಂಸದ ಜಿ. ಕುಮಾರ ನಾಯಕ ಗುಣಮಟ್ಟದ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ವೀಕ್ಷಣೆ ನಡೆಸಿ, ಸಭೆ ನಡೆಸಿದರು. ಈ ಸಂದರ್ಭದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನೆ ನಿರ್ದೇಶಕ ಭಾವನೇಶ್ ಕುಮಾರ ಇನ್ನಿತರರು ಉಪಸ್ಥಿತರಿದ್ದರು.

><><><><><><><><

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ 'ಆರೋಗ್ಯ ಆವಿಷ್ಕಾರ' ಯೋಜನೆಯಡಿ ೪೪೦.೬೮ ಕೋಟಿ ರೂಪಾಯಿ ವೆಚ್ಚದ ಕಲ್ಯಾಣ ಕರ್ನಾಟಕ ಭಾಗದಲ್ಲಿ ವಿವಿಧ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಸಚಿವರು ನಾಳೆ ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಕೆಆರ್‌ಡಿಬಿ ಅಧ್ಯಕ್ಷ ಡಾ.ಅಜಯಸಿಂಗ್, ಸಚಿವರಾದ ದಿನೇಶ ಗುಂಡೂರಾವ್ ಸೇರಿದಂತೆ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಉಸ್ತುವಾರಿ

ಸಚಿವರು, ಶಾಸಕರು, ಹಿರಿಯ ಅಧಿಕಾರಿಗಳು ಆಗಮಿಸುವ ನಿರೀಕ್ಷೆ ಇದೆ. ಮುಖ್ಯಮಂತ್ರಿ ಪ್ರವಾಸದ ಹಿನ್ನೆಲೆಯಲ್ಲಿ ಸೂಕ್ತ ಬಂದೋಬಸ್ತ್‌ಗಾಗಿ ತೆಗೆದುಕೊಂಡ ಕ್ರಮಗಳನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಮತ್ತು ಕಲಬುರಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎ.ಶ್ರೀನಿವಾಸ, ಹೆಚ್ಚುವರಿ ಎಸ್.ಪಿ.ಧರಣೇಶ್ ಜಿಲ್ಲಾ ಕ್ರೀಡಾಂಗಣಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

><><><><><><><><

ಸಚಿವ ಪ್ರಿಯಾಂಕ್ ಖರ್ಗೆ ಫ್ರಾನ್ಸ್‌ನ ಪ್ರಮುಖ ಜಾಗತಿಕ ವೇದಿಕೆಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸುತ್ತಿದ್ದು, ಅವರು ಪ್ರಸ್ತುತ ಜೂನ್ ೧೧ ರಿಂದ ೧೬ರವರೆಗೆ ಫ್ರಾನ್ಸ್‌ಗೆ ಅಧಿಕೃತ ಭೇಟಿಯಲ್ಲಿದ್ದಾರೆ. ತಂತ್ರಜ್ಞಾನ, ನಾವೀನ್ಯತೆ ಮತ್ತು ಸ್ಟಾರ್ಟ್‌ಅಪ್ ಪರಿಸರ ವ್ಯವಸ್ಥೆಗಳು ಹಾಗೂ ಏರೋಸ್ಪೇಸ್ ಮತ್ತು ರಕ್ಷಣೆಯಲ್ಲಿ ಕರ್ನಾಟಕದ ನಾಯಕತ್ವವನ್ನು ಎತ್ತಿ ತೋರಿಸುವ ಮೂರು ಪ್ರಮುಖ ಜಾಗತಿಕ ವೇದಿಕೆಗಳಾದ ವಿವಾ ಟೆಕ್ನಾಲಜಿ, ಪ್ಯಾರಿಸ್ ಏರ್ ಫೋರಮ್ ಮತ್ತು ಪ್ಯಾರಿಸ್ ಏರ್ ಶೋಗಳಲ್ಲಿ ಭಾಗವಹಿಸಲು ಪ್ರಿಯಾಂಕ್ ಖರ್ಗೆ ಅವರನ್ನು ಆಹ್ವಾನಿಸಲಾಗಿದೆ. ಜಾಗತಿಕ ತಂತ್ರಜ್ಞಾನ, ನಾವೀನ್ಯತೆ, ಸ್ಟಾರ್ಟ್‌ಅಪ್‌ಗಳು ಮತ್ತು ಏರೋಸ್ಪೇಸ್ ವಲಯಗಳಲ್ಲಿ ಕರ್ನಾಟಕದ ನಾಯಕತ್ವವನ್ನು ಜಾಗತಿಕ ವೇದಿಕೆಯಲ್ಲಿ ಪ್ರಸ್ತುತಪಡಿಸುತ್ತಿದ್ದಾರೆ.

><><><><><><><><

ಮುಂಗಾರು ಹಂಗಾಮಿನಲ್ಲಿ ಮಣ್ಣಿನ ಪರೀಕ್ಷೆ ಮತ್ತು ಬಿತ್ತನೆ ಬೀಜ ಆಯ್ಕೆ ಆಯ್ಕೆ ಕುರಿತು ರೈತರಿಗೆ ತಿಳುವಳಿಕೆ ನೀಡುವ ಸಲುವಾಗಿ ದಾವಣಗೆರೆ ಜಿಲ್ಲೆಯಲ್ಲಿ ಹಮ್ಮಿಕೊಂಡಿದ್ದ ವಿಕಸಿತ ಸಂಕಲ್ಪ ಕೃಷಿ ಅಭಿಯಾನ ಯಶಸ್ವಿಯಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಟಿ.ಎನ್.ದೇವರಾಜ್ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ೧೫ ದಿನಗಳ ಕಾಲ ನಡೆದ ಅಭಿಯಾನದ ಉದ್ದಕ್ಕೂ ೬೦ ಕ್ಕೂ ಹೆಚ್ಚು ಗ್ರಾಮಗಳ ೨೫. ಸಾವಿರಕ್ಕೂ ಅಧಿಕ ರೈತರನ್ನು ತಲುಪಲಾಗಿದೆ ಎಂದರು.

><><><><><><><><

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ೨೦೨೪-೨೫ನೇ ಸಾಲಿನಲ್ಲಿ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅರ್ಜಿ ಆಹ್ವಾನಿಸಲಾಗಿದೆ. ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ೩೯೨ ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ೧೬೨ ಅಭ್ಯರ್ಥಿಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ ಹಾಗೂ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್ಮೆಂಟ್ ಬೆಂಗಳೂರು ರವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ. ತರಬೇತಿ ಪಡೆಯಲು ಆಸಕ್ತಿ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಜೂನ್ ೧೯ ರೊಳಗೆ ಕಚೇರಿಯ ಸಮಯದಲ್ಲಿ ಸಲ್ಲಿಸಬೇಕಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೂರವಾಣಿ ಸಂಖ್ಯೆ:**080-22040633** ಸಂಪರ್ಕಿಸಬಹುದಾಗಿದೆ.

><><><><><><><><

ಹಾವೇರಿ ಜಿಲ್ಲಾ ಪೋಲೀಸ್ ವತಿಯಿಂದ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ 'ಹುಷಾರಾಗಿರಿ' ಗೀತೆಯ ವಿಡಿಯೊ ಸಿದ್ಧಪಡಿಸಲಾಗಿದ್ದು, ಅದನ್ನು ಸೈಬರ್, ಆರ್ಥಿಕ ಹಾಗೂ ಮಾದಕದ್ರವ್ಯ ನಿಯಂತ್ರಣ ಠಾಣೆಯಲ್ಲಿ ಬಿಡುಗಡೆ ಮಾಡಲಾಯಿತು. ಗೀತೆಯಲ್ಲಿ ಸೆನ್ ಠಾಣೆಯ ಕಾನ್ಸ್ಟೇಬಲ್ ಆನಂದ ದೊಡ್ಡಕುರುಬರ ಅವರು ಸಾಹಿತ್ಯ ಬರೆದು ಈ ಹಾಡು ಹಾಡಿದ್ದಾರೆ. 'ಸೈಬರ್ ವಂಚನೆ ಆದ ತಕ್ಷಣವೇ ಕರೆ ಮಾಡಿ **1930/112** ಎಂಬ ಸಂದೇಶವನ್ನೂ ತಿಳಿಸಿದ್ದಾರೆ.

><><><><><><><><

ಉತ್ತರಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆ ಸುರಿಯುತ್ತಿರುವುದರಿಂದ ರಾಷ್ಟ್ರೀಯ ಹೆದ್ದಾರಿಯಲ್ಲಿ ಭೂ ಕುಸಿತವಾಗುವ ಸ್ಥಳಗಳಲ್ಲಿ ಎಲ್ಲಾ ತರಹದ ವಾಹನಗಳ ನಿಲುಗಡೆಯನ್ನು ಮಳೆಗಾಲ ಮುಕ್ತಾಯವಾಗುವವರೆಗೆ ನಿರ್ಬಂಧಿಸಿ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಆದೇಶ ಹೊರಡಿಸಿದ್ದಾರೆ.

><><><><><><><><